"ತಿದ್ದುಪಡಿಯಾಗದ ಪ್ರತಿ/**unedited copy**, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಕರ್ನಾಟಕ ವಿಧಾನ ಪರಿಷತ್ತು**

15ನೇ ಜುಲೈ 2019
ಸೋಮವಾರ

**ವಿಷಯಾನುಕ್ರಮಣಿಕೆ**

1. **ಪ್ರಕಟಣೆಗಳು**

2. **ಬಹುಮತವಿಲ್ಲದ ಸರ್ಕಾರದಿಂದ ಪ್ರಶ್ನೆಗಳಿಗೆ ಉತ್ತರ ಪಡೆಯಲು ವಿರೋಧ ಪಕ್ಷದವರಿಂದ ನಿರಾಕರಣೆ ಮತ್ತು ಸರ್ಕಾರದ ರಾಜೀನಾಮೆಗೆ ಒತ್ತಾಯಿಸಿ ಧರಣಿ.**

   - ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು)
   - ಶ್ರೀ ಆಯನೂರು ಮಂಜುನಾಥ
   - ಡಾ:ಜಯಮಾಲ (ಸಭಾನಾಯಕರು)
   - ಶ್ರೀ ಐವನ್ ಡಿ'ಸೋಜಾ
   - ಶ್ರೀ ಸಾ.ರಾ.ಮಹೇಶ್(ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು)

(85) 15.07.2019 KG.BNS 12.10

**ಕರ್ನಾಟಕ ವಿಧಾನ ಪರಿಷತ್ತು**

**ಸೋಮವಾರ, 15ನೇ ಜುಲೈ 2019**

**ಸದನವು ವಿಧಾನ ಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ**

**ಮಧ್ಯಾಹ್ನ 12 ಗಂಟೆ 18 ನಿಮಿಷಕ್ಕೆ ಸಮಾವೇಶಗೊಂಡಿತು.**

**ಉಪ ಸಭಾಪತಿ (ಶ್ರೀ ಎಸ್.ಎಲ್.ಧರ್ಮೇಗೌಡ) ಅವರು ಪೀಠದಲ್ಲಿ ಉಪಸ್ಥಿತರಿದ್ದರು.**

~~~~~~~

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"
~~~~~~~

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಒಂದು ನಿಮಿಷ..,

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೆ, ಈಗ ಪ್ರಕಟಣೆಗಳು ಇವೆ. ತಾವು ಇದಾದ ನಂತರ ಮಾತನಾಡಿ.

## 1. ಪ್ರಕಟಣೆಗಳು

1. ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರಾಗಿ ನೇಮಕಗೊಂಡಿರುವ ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ ಅವರಿಗೆ ಸದನದ ಪರವಾಗಿ ಹೃತ್ಪೂರ್ವಕವಾದ ಅಭಿನಂದನೆಗಳು ಹಾಗೂ ಕರ್ನಾಟಕ ವಿಧಾನ ಪರಿಷತ್ತಿಗೆ ನೂತನವಾಗಿ ನಾಮನಿರ್ದೇಶನಗೊಂಡಿರುವ ಶ್ರೀ ತಿಪ್ಪಣ್ಣ ಕಮಕನೂರ ಅವರನ್ನು ಹೃತ್ಪೂರ್ವಕವಾಗಿ ಅವರಿಗೂ ಸಹ ಹೃತ್ಪೂರ್ವಕವಾಗ ಅಭಿನಂದನೆಗಳು.

2. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 9ರ ಮೇರೆಗೆ ಮಾನ್ಯ ಸಭಾಪತಿಯವರ ಮತ್ತು ಉಪ ಸಭಾಪತಿಯವರ ಗೈರು ಹಾಜರಿಯಲ್ಲಿ ಮಾನ್ಯ ಸಭಾಪತಿಯವರ ಸ್ಥಾನದಲ್ಲಿ ಪದಧಾರಣ ಮಾಡಲು ಈ ಮುಂದಿನ ಸದಸ್ಯರುಗಳನ್ನು ನಾಮನಿರ್ದೇಶನ ಮಾಡಲಾಗಿದೆ:

1. ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ
2. ಶ್ರೀ ಎಸ್.ಆರ್.ಪಾಟೀಲ್
3. ಶ್ರೀ ಕೆ.ಸಿ.ಕೊಂಡಯ್ಯ
4. ಡಾ॥ತೇಜಸ್ವಿನಿ ಗೌಡ

3. ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 222ರ ಮೇರೆಗೆ 138ನೇ ಅಧಿವೇಶನದಲ್ಲಿ ಕಲಾಪಗಳ ಸಲಹಾ ಸಮಿತಿಯನ್ನು ಈ ಮುಂದಿನಂತೆ ರಚಿಸಲಾಗಿರುತ್ತದೆ:

| ಕ್ರಮ ಸಂಖ್ಯೆ | ಶ್ರೀಯುತರುಗಳಾದ | ಸ್ಥಾನ |
|---|---|---|
| 1 | ಶ್ರೀ ಎಸ್.ಎಲ್.ಧರ್ಮೇಗೌಡ, ಮಾನ್ಯ ಉಪ ಸಭಾಪತಿಯವರು | ಸದಸ್ಯರು |
| 2 | ಡಾ॥ಜಯಮಾಲ, ಮಾನ್ಯ ಸಭಾನಾಯಕರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು | ಸದಸ್ಯರು |

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

| | | |
|---|---|---|
| 3 | ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು | ಸದಸ್ಯರು |
| 4 | ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ, ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು | ಸದಸ್ಯರು |
| 5 | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು | ಸದಸ್ಯರು |
| 6 | ಡಾ॥ವೈ.ಎ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ಸದಸ್ಯರು ಹಾಗೂ ವಿರೋಧ ಪಕ್ಷದ ಉಪ ನಾಯಕರು | ಸದಸ್ಯರು |
| 7 | ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 8 | ಶ್ರೀ ಎಸ್.ಆರ್.ಪಾಟೀಲ್, ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 9 | ಶ್ರೀ ಆಯನೂರು ಮಂಜುನಾಥ್, ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| | ವಿಶೇಷ ಆಹ್ವಾನಿತರು | |
| 1 | ಶ್ರೀ ಹೆಚ್.ಡಿ.ಕುಮಾರಸ್ವಾಮಿ, ಗೌರವಾನ್ವಿತ ಮಾನ್ಯ ಮುಖ್ಯ ಮಂತ್ರಿಗಳು | |
| 2 | ಡಾ॥ ಜಿ.ಪರಮೇಶ್ವರ, ಗೌರವಾನ್ವಿತ ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಬೆಂಗಳೂರು ಅಭಿವೃದ್ಧಿ, ನಗರ ಯೋಜನೆ, ಕಾನೂನು ಮತ್ತು ಸಂಸದೀಯ ವ್ಯವಹಾರ, ಐ.ಟಿ. ಬಿ.ಟಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು | |

ಮಾನ್ಯ ಸಭಾಪತಿಯವರು ಕಾರ್ಯಕಲಾಪಗಳ ಸಲಹಾ ಸಮಿತಿಯ ಅಧ್ಯಕ್ಷರಾಗಿರುತ್ತಾರೆ.

(86)15-07-2019(12-20)ಎಂವಿ-ಕೆಎಸ್

**2. ಬಹುಮತವಿಲ್ಲದ ಸರ್ಕಾರದಿಂದ ಪ್ರಶ್ನೆಗಳಿಗೆ ಉತ್ತರ ಪಡೆಯಲು ವಿರೋಧ ಪಕ್ಷದವರಿಂದ ನಿರಾಕರಣೆ ಮತ್ತು ಸರ್ಕಾರದ ರಾಜೀನಾಮೆಗೆ ಒತ್ತಾಯಿಸಿ ಧರಣಿ.**

**ಉಪ ಸಭಾಪತಿಯವರು:-** ಈಗ ಪ್ರಶ್ನೋತ್ತರ ಅವಧಿ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೆ, ಈಗ ಸರ್ಕಾರಕ್ಕೆ ಬಹುಮತ ಇಲ್ಲ. ಶಾಸಕರುಗಳು ರಾಜೀನಾಮೆಯನ್ನು ಕೊಟ್ಟಿದ್ದಾರೆ.

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಈಗ ಪ್ರಶ್ನೋತ್ತರವನ್ನು ತೆಗೆದುಕೊಂಡಿದ್ದೀರಿ. ಮಧ್ಯದಲ್ಲಿ ಈ ರೀತಿ ಗಲಾಟೆ ಮಾಡುವುದು ಸರಿಯಲ್ಲ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ/ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಉಪ ಸಭಾಪತಿಯವರು:-** ಗೌರವಾನ್ವಿತ ವಿರೋಧ ಪಕ್ಷದ ನಾಯಕರಿಗೆ ಕಾರ್ಯಸೂಚಿಯ ನಿಯಮಗಳು ಗೊತ್ತಿದೆ. ಮಾನ್ಯ ವಿರೋಧ ಪಕ್ಷದ ನಾಯಕರು ತಾವು ಮಾತನಾಡುವ ಬಗ್ಗೆ ನೋಟೀಸ್ ಕೊಟ್ಟರೆ ನಂತರ ಪರಿಶೀಲನೆ ಮಾಡುತ್ತೇನೆ.

**(ಗೊಂದಲ)**

**ಶ್ರೀ ಐವನ್ ಡಿ’ಸೋಜಾ:-** ಮಾನ್ಯ ಸಭಾಪತಿಯವರೆ, ಈಗ ಪ್ರಶ್ನೋತ್ತರ ಅವಧಿ ಆಗಲಿ. ಪ್ರಶ್ನೋತ್ತರ ಅವಧಿ ಮುಗಿದ ನಂತರ ವಿರೋಧ ಪಕ್ಷದ ನಾಯಕರು ಯಾವ ವಿಷಯವನ್ನಾದರು ಪ್ರಸ್ತಾಪ ಮಾಡಲಿ.

**ಉಪ ಸಭಾಪತಿಯವರು:-** ಗೌರವಾನ್ವಿತ ವಿರೋಧ ಪಕ್ಷದ ನಾಯಕರು ಮತ್ತು ಸದಸ್ಯರುಗಳು ದಯಮಾಡಿ ಸದನದ ಗೌರವವನ್ನು ಕಾಪಾಡಬೇಕು. ಅದರ ಜೊತೆಯಲ್ಲಿ ನಿಯಮಗಳನ್ನು ನೋಡಿಕೊಂಡು ಅದರ ಪ್ರಕಾರ ಸೂಚನಾ ಪತ್ರವನ್ನು ನೀಡಿದರೆ ಅದನ್ನು ಪರಿಶೀಲಿಸಲಾಗುವುದು. ದಯಮಾಡಿ ಎಲ್ಲರೂ ಈಗ ಕುಳಿತುಕೊಳ್ಳಬೇಕು.

**ಡಾ:ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ತಾವು ಮಾತನಾಡುವಾಗ ಮಾನ್ಯ ಸದಸ್ಯರು ಸ್ವಲ್ಪ ನಿಶ್ಶಬ್ಧವಾಗಿರಲಿ.

**ಉಪ ಸಭಾಪತಿಯವರು:-** ನೋಟೀಸ್ ಕೊಡದೇ ಯಾವುದೇ ವಿಷಯವನ್ನು ತೆಗೆದುಕೊಳ್ಳುವುದಕ್ಕಾಗುವುದಿಲ್ಲ. ದಯಮಾಡಿ ಸುಮ್ಮನೆ ಸದನದ ಸಮಯವನ್ನು ವ್ಯಯ ಮಾಡಬೇಡಿ, ಸದನ ಯಾವ ರೀತಿ ನಡೆಯುತ್ತಿದೆ ಎನ್ನುವುದನ್ನು ಸಾರ್ವಜನಿಕರು ನೋಡುತ್ತಿದ್ದಾರೆ. ರಾಜ್ಯದಲ್ಲಿ ಅನೇಕ ಸಮಸ್ಯೆಗಳಿವೆ ಎಂದು ಮಾನ್ಯ ವಿರೋಧ ಪಕ್ಷದ ನಾಯಕರಿಗೂ ಗೊತ್ತಿದೆ.

**(ಗೊಂದಲ)**

**ಡಾ:ಜಯಮಾಲ:-** ಮಾನ್ಯ ಸಭಾಪತಿಯವರೆ, ಸಾರ್ವಜನಿಕರ...

**ಉಪ ಸಭಾಪತಿಯವರು:-** ದಯಮಾಡಿ ಮಾನ್ಯ ವಿರೋಧ ಪಕ್ಷದ ನಾಯಕರು ಸೂಚನಾ ಪತ್ರವನ್ನು ನೀಡಿದರೆ ಅದನ್ನು ಪರಿಶೀಲಿಸಲಾಗುವುದು. ಸದನದಲ್ಲಿ ನೋಟೀಸ್ ಕೊಡದೆ ಮಾಡುವುದಕ್ಕೆ ಆಗುತ್ತದೆಯೇ?

**(ಗೊಂದಲ)**

“ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಆಪರೇಷನ್ ಕಮಲ...

**ಉಪ ಸಭಾಪತಿಯವರು:-** ದಯವಿಟ್ಟು ಸಮಯವನ್ನು ವ್ಯಯ ಮಾಡಬೇಡಿ. ಇವತ್ತಿನ ದಿವಸ ರಾಜ್ಯಾದ್ಯಂತ ಕುಡಿಯುವ ನೀರಿನ ಬವಣೆ ಇದೆ, ವಿರೋಧ ಪಕ್ಷದವರು ಅದರ ಬಗ್ಗೆ ಮಾತನಾಡಲಿ. ಸೂಚನಾ ಪತ್ರವನ್ನು ನೀಡಿದರೆ, ನಂತರ ಅದನ್ನು ಪರಿಶೀಲಿಸಲಾಗುವುದು. ಇಲ್ಲದಿದ್ದರೆ ನಾವೇ ಮಾಡಿರುವ ನಿಯಮವನ್ನು ಮಾನ್ಯ ವಿರೋಧ ಪಕ್ಷದ ನಾಯಕರು ಉಲ್ಲಂಘನೆ ಮಾಡಿದ ಹಾಗಾಗುತ್ತದೆ. ಆದುದರಿಂದ ದಯಮಾಡಿ ಎಲ್ಲರೂ ಕುಳಿತುಕೊಳ್ಳಿ.

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಆಪರೇಷನ್ ಕಮಲಕ್ಕೆ... ಆಪರೇಷನ್ ಕಮಲಕ್ಕೆ...

**(ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರುಗಳು 'ಆಪರೇಷನ್ ಕಮಲಕ್ಕೆ ಧಿಕ್ಕಾರ' ಎಂದು ಕೂಗುತ್ತಿದ್ದರು)**

**(ಗೊಂದಲ)**

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರಿಗೆ ಎಲ್ಲಾ ವಿಚಾರ ಸಹ ಗೊತ್ತಿದೆ. ತಾವು ದಯಮಾಡಿ ಕುಳಿತುಕೊಳ್ಳಬೇಕು. ತಾವು ಸೂಚನಾ ಪತ್ರವನ್ನು ನೀಡಿದರೆ ಅದನ್ನು ಪರಿಶೀಲಿಸಲಾಗುವುದು. ನಾವೇ ರಚನೆ ಮಾಡಿದಂತಹ ನಿಯಮಗಳನ್ನು ಉಲ್ಲಂಘನೆ ಮಾಡಿದಂತಾಗುತ್ತದೆ. ಸದನ ಹೇಗೆ ನಡೆಯುತ್ತಿದೆ ಎಂದು ಹೊರಗಡೆ ಜನರು ನೋಡುತ್ತಿದ್ದಾರೆ. ಮೇಲ್ಮನೆಗೆ ತನ್ನದೇ ಆದಂತಹ ಪಾವಿತ್ರ್ಯತೆ ಇದೆ. ಪಾವಿತ್ರ್ಯತೆಯನ್ನು ಕಾಪಾಡುವ ರೀತಿಯಲ್ಲಿ ಸದನವನ್ನು ಪ್ರಾರಂಭ ಮಾಡಬೇಕು ತಾವುಗಳು ದಯಮಾಡಿ ಕುಳಿತುಕೊಳ್ಳುವುದು. ಈಗ ನಾನು ನಿಂತಿದ್ದೇನೆ, ತಾವುಗಳು ದಯಮಾಡಿ ಕುಳಿತುಕೊಳ್ಳಿ.

**ಡಾ:ತೇಜಸ್ವಿನಿ ಗೌಡ:-** ಮಾನ್ಯ ಸಭಾಪತಿಯವರೆ, ಮಂತ್ರಿಗಳು ರಾಜೀನಾಮೆ ಕೊಟ್ಟಿದ್ದಾರೆ.

**ಶ್ರೀ ಎಸ್.ಆರ್.ಪಾಟೀಲ್:-** ಮಾನ್ಯ ಸಭಾಪತಿಯವರೆ, ಮಾನ್ಯ ವಿರೋಧ ಪಕ್ಷದ ನಾಯಕರು ಮಾನ್ಯ ಸಭಾಪತಿಯವರ ಪೀಠಕ್ಕೆ ಗೌರವ ಕೊಡುವುದನ್ನು ಮೊದಲು ಕಲಿಯಬೇಕು.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಉಪ ಸಭಾಪತಿಯವರು:-** ದಯಮಾಡಿ ಅದು ಪ್ರಶ್ನೋತ್ತರ ವೇಳೆ ಆದನಂತರ. ಮಾನ್ಯ ವಿರೋಧ ಪಕ್ಷದ ನಾಯಕರಿಗೆ ಅವಕಾಶವನ್ನು ಕೊಡುತ್ತೇನೆ. ನಿಮಗೆ ನಿಯಮಗಳು ಗೊತ್ತಿದೆ. ನೀವು ಆ ನಿಯಮಗಳನ್ನು ಉಲ್ಲಂಘನೆ ಮಾಡಿದಂತಾಗುತ್ತದೆ ಹಾಗೆಯೇ ತಾವು ನಿಯಮವನ್ನು ಪಾಲಿಸಬೇಕಾಗುತ್ತದೆ. ತಾವು ದಯಮಾಡಿ ಕುಳಿತುಕೊಳ್ಳಿ.

**(ಗೊಂದಲ)**

**ಡಾ:ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ಮಾನ್ಯ ವಿರೋಧ ಪಕ್ಷದ ನಾಯಕರಲ್ಲಿ ನನ್ನ ಮನವಿ ಎಂದರೆ, ಮಾನ್ಯ ಸಭಾಪತಿಯವರು ಮಾತನಾಡುವಾಗ ಮಾನ್ಯ ವಿರೋಧ ಪಕ್ಷದ ನಾಯಕರು ಮಾನ್ಯ ಸಭಾಪತಿಯವರಿಗೆ ಗೌರವ ಕೊಡಬೇಕು.

**(ಗೊಂದಲ)**

**ಡಾ:ತೇಜಸ್ವಿನಿ ಗೌಡ:-** ಮಾನ್ಯ ಸಭಾಪತಿಯವರೆ, ಮಾನ್ಯ ಮಂತ್ರಿಗಳು ರಾಜೀನಾಮೆಯನ್ನು ಕೊಟ್ಟಿದ್ದಾರೆ.

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ನನ್ನದು ಪಾಯಿಂಟ್ ಆಫ್ ಆರ್ಡರ್ ಇದೆ.

**ಉಪ ಸಭಾಪತಿಯವರು:-** ತಾವು ನನಗೆ ಸೂಚನಾ ಪತ್ರವನ್ನು ನೀಡಿ ಅದನ್ನು ಪರಿಶೀಲನೆ ಮಾಡಿ ನಂತರ ಅವಕಾಶ ನೀಡುತ್ತೇನೆ.

**(ಗೊಂದಲ)**

**ಡಾ:ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ರಾಜ್ಯದಲ್ಲಿ ಬಹಳ ಸಮಸ್ಯೆಗಳಿವೆ. ತಾವು ಇವರಿಗೆ ತಾಳ ಹಾಕಬಾರದು.

**(ಗೊಂದಲ)**

**ಉಪ ಸಭಾಪತಿಯವರು:-** ತಾವುಗಳು ಸಮಯವನ್ನು ವ್ಯಯ ಮಾಡಬೇಡಿ. ನನಗೆ ಸೂಚನಾ ಪತ್ರವನ್ನು ನೀಡಿ ಅದನ್ನು ಪರಿಶೀಲನೆ ಮಾಡುತ್ತೇನೆ. ಪ್ರಶ್ನೋತ್ತರ ವೇಳೆ ಆಗುವ ತನಕ ಅವಕಾಶ ಕೊಡುವುದಕ್ಕೆ ಆಗುವುದಿಲ್ಲ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ಪಾಯಿಂಟ್ ಆಫ್ ಆರ್ಡರ್ ಇದೆ.

**ಉಪ ಸಭಾಪತಿಯವರು:-** ಗೌರವಾನ್ವಿತ ಸದಸ್ಯರೆ ತಮಗೆ ನಿಯಮಗಳು ಗೊತ್ತಿದೆ. ದಯಮಾಡಿ ತಾವು ನಿಯಮವನ್ನು ಉಲ್ಲಂಘನೆ ಮಾಡಬೇಡಿ. ಸೂಚನಾ ಪತ್ರವನ್ನು ನೀಡಿದರೆ ಖಂಡಿತವಾಗಿ ಅದನ್ನು ಪರಿಶೀಲನೆ ಮಾಡುತ್ತೇನೆ.

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ಖಂಡಿತವಾಗಿಯೂ ನಮಗೆ ನಿಯಮಗಳ ಬಗ್ಗೆ ಗೌರವವಿದೆ.

**ಉಪ ಸಭಾಪತಿಯವರು:-** ಸರ್ಕಾರದ ಕಾರ್ಯಕಲಾಪಗಳ ಬಗ್ಗೆ ಹೊರಗಡೆ ಸಾರ್ವಜನಿಕರು ಗಮನಿಸುತ್ತಿದ್ದಾರೆ. ಇವತ್ತು ರಾಜ್ಯಾದ್ಯಂತ ಕುಡಿಯುವ ನೀರಿನ ಬವಣೆ ಇದೆ ಮತ್ತು ಸಮಸ್ಯೆಗಳಿವೆ. ಇರುವಂತಹ ಆ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಬೇಕು. ಆದುದರಿಂದ ಇದಕ್ಕೆ ಅವಕಾಶ ಕೊಡುವುದಕ್ಕೆ ಆಗುವುದಿಲ್ಲ.

**(ಗೊಂದಲ)**

**ಶ್ರೀ ಮಾನೆ ಶ್ರೀನಿವಾಸ:-** ಮಾನ್ಯ ಸಭಾಪತಿಯವರೆ, ತಾವು ನೀಡಿರುವ ರೂಲಿಂಗ್ ಅನ್ನು ಪಾಲನೆ ಮಾಡಲಿ. ತಮ್ಮ ಪೀಠಕ್ಕೆ ಮೊದಲು ಗೌರವ ನೀಡಲಿ.

**(ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರು ವಿರೋಧ ಪಕ್ಷದ ವಿರುದ್ಧ 'ಧಿಕ್ಕಾರ' ಕೂಗಿದರು)**

**(ಗೊಂದಲ)**

**ಉಪ ಸಭಾಪತಿಯವರು:-** ತಾವು ದಯವಿಟ್ಟು ಸೂಚನಾ ಪತ್ರವನ್ನು ನೀಡಿದರೆ ಅದನ್ನು ನಂತರ ಪರಿಶೀಲನೆ ಮಾಡುತ್ತೇನೆಂದು ಹೇಳಿದ್ದೇನೆ.

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ನನ್ನದು ಪಾಯಿಂಟ್ ಆಫ್ ಆರ್ಡರ್ ಇದೆ.

**ಶ್ರೀ ಮಾನೆ ಶ್ರೀನಿವಾಸ:-** ಮಾನ್ಯ ಸಭಾಪತಿಯವರೆ, ಮೊದಲು ಅವರು ಸಭಾಪತಿಯವರ ಪೀಠಕ್ಕೆ ಗೌರವ ನೀಡಲಿ. ಮಾನ್ಯ ಸಭಾಪತಿಯವರು ರೂಲಿಂಗ್ ಅನ್ನು ನೀಡಿದ್ದಾರೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಈಗ ಪ್ರಶ್ನೋತ್ತರ ವೇಳೆ ನಡೆಯಲಿ.

**ಉಪ ಸಭಾಪತಿಯವರು:-** ತಾವು ದಯಮಾಡಿ ಪ್ರಶ್ನೋತ್ತರ ಸಂದರ್ಭದಲ್ಲಿ ನಿಯಮಗಳನ್ನು ಉಲ್ಲಂಘನೆ ಮಾಡಬೇಡಿ. ದಯಮಾಡಿ ಮಾನ್ಯ ಸದಸ್ಯರುಗಳು ಕುಳಿತುಕೊಳ್ಳಿ.

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ಪಾಯಿಂಟ್ ಆಫ್ ಆರ್ಡರ್‌ಗೆ ಸೂಚನಾ ಪತ್ರವನ್ನು ಕೊಡಬೇಕಾಗಿಲ್ಲ. ನಾನು raise ಮಾಡುತ್ತಿರುವುದು 'ಪಾಯಿಂಟ್ ಆಫ್ ಆರ್ಡರ್'.

**ಉಪ ಸಭಾಪತಿಯವರು:-** ದಯಮಾಡಿ ಮಾನ್ಯ ಸದಸ್ಯರುಗಳು ಕುಳಿತುಕೊಳ್ಳಿ.

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ಆಡಳಿತ ಪಕ್ಷದವರಿಗೆ ಸ್ವಲ್ಪ ತಾಳ್ಮೆ ಬೇಕು.

**(ಗೊಂದಲ)**

**ಡಾ: ತೇಜಸ್ವಿನಿ ಗೌಡ:-** ಮಾನ್ಯ ಸಭಾಪತಿಯವರೆ, ಮಾನ್ಯ ಸದಸ್ಯರು ಪಾಯಿಂಟ್ ಆಫ್ ಆರ್ಡರ್ ಬಗ್ಗೆ ಮಾತನಾಡುತ್ತಿದ್ದಾರೆ.

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೆ, ಮೊದಲು ಪ್ರಶ್ನೋತ್ತರ ವೇಳೆ ಆಗಲಿ.

**(ಗೊಂದಲ)**

**ಉಪ ಸಭಾಪತಿಯವರು:-** ಗೌರವಾನ್ವಿತ ಸದಸ್ಯರಾದ ಆಯನೂರು ಮಂಜುನಾಥ್‌ರವರು ಪಾಯಿಂಟ್ ಆಫ್ ಆರ್ಡರ್ ಬಗ್ಗೆ ಹೇಳುತ್ತಿದ್ದಾರೆ ದಯವಿಟ್ಟು ಕೇಳಿ.

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ತಾವು ನಿಯಮಾವಳಿ ಪ್ರಕಾರ ಸದನವನ್ನು ಪ್ರಾರಂಭ ಮಾಡುತ್ತಿದ್ದೀರಿ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಉಪ ಸಭಾಪತಿಯವರು:-** ಯಾವುದೇ ಕಾರಣಕ್ಕೂ ಪ್ರಶ್ನೋತ್ತರ ವೇಳೆಯಾಗದೆ, ಇದನ್ನು ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಕೊಡುವುದಕ್ಕೆ ಸಾಧ್ಯವಿಲ್ಲ.

**ಶ್ರೀ ಕೆ.ಟಿ.ಶ್ರೀಕಂಠೇಗೌಡ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ವೇಳೆಯಲ್ಲಿ ಪಾಯಿಂಟ್ ಆಫ್ ಆರ್ಡರ್ ಹೇಗೆ ಬರುತ್ತದೆ?

**(ಗೊಂದಲ)**

**ಉಪ ಸಭಾಪತಿಯವರು:-** ಪ್ರಶ್ನೋತ್ತರ ವೇಳೆಯನ್ನು ತೆಗೆದುಕೊಳ್ಳದಿದ್ದರೆ ನಿಯಮ ಉಲ್ಲಂಘನೆ ಆಗುತ್ತದೆ. ದಯಮಾಡಿ ಗೌರವಾನ್ವಿತ ಸದಸ್ಯರು ಅರ್ಥ ಮಾಡಿಕೊಳ್ಳಬೇಕು.

**ಡಾ: ಜಯಮಾಲ:-** ಮಾನ್ಯ ಸಭಾಪತಿಯವರೆ, ಪ್ರಶ್ನೋತ್ತರ ಅವಧಿಯಲ್ಲಿ ಪಾಯಿಂಟ್ ಆಫ್ ಆರ್ಡರ್ ಬರುವುದಿಲ್ಲ.

**(ಗೊಂದಲ)**

**ಉಪ ಸಭಾಪತಿಯವರು:-** ಪ್ರಶ್ನೋತ್ತರ ವೇಳೆ ಮುಗಿದ ನಂತರ ಗೌರವಾನ್ವಿತ ವಿರೋಧ ಪಕ್ಷದ ನಾಯಕರಿಗೆ ಅವಕಾಶ ಮಾಡಿಕೊಡುತ್ತೇನೆ.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ವಿರೋಧ ಪಕ್ಷದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೆ, ರಾಜ್ಯದಲ್ಲಿ ಕುಡಿಯುವುದಕ್ಕೆ ನೀರಿಲ್ಲ ಮತ್ತು ದನಗಳಿಗೆ ಮೇವಿಲ್ಲ.

**(ಗೊಂದಲ)**

**ಉಪ ಸಭಾಪತಿಯವರು:-** ಈಗ ಪ್ರಶ್ನೋತ್ತರ ವೇಳೆ. ಈಗ ಮಾನ್ಯ ಸದಸ್ಯರಾದ ವಿಜಯ್ ಸಿಂಗ್‌ರವರ ಪ್ರಶ್ನೆ.

**(ಗೊಂದಲ)**

**ಡಾ: ಜಯಮಾಲ:-** ಮಾನ್ಯ ಸಭಾಪತಿಯವರೆ, ತಾವು ಇದಕ್ಕೆ ಅವಕಾಶ ನೀಡಬಾರದು. ಮೊದಲು ಪ್ರಶ್ನೋತ್ತರ ವೇಳೆ ಮುಗಿಯಲಿ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ಸದನದಲ್ಲಿ ಉತ್ತರ ಕೊಡುವುದಕ್ಕೆ ಸಂಬಂಧಪಟ್ಟ ಸಚಿವರು ಯಾರಿದ್ದಾರೆ? ಎಲ್ಲಾ ಸಚಿವರು ರಾಜೀನಾಮೆ ಕೊಟ್ಟಿದ್ದಾರೆ.

**(ಗೊಂದಲ)**

**ಶ್ರೀ ಎಂ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೆ, ಅವರು ಸುಳ್ಳು ಹೇಳುತ್ತಿದ್ದಾರೆ. ಸದನದಲ್ಲಿ ಎಲ್ಲಾ ಸಚಿವರು ಇದ್ದಾರೆ.

**(ಗೊಂದಲ)**

**ಉಪ ಸಭಾಪತಿಯವರು:-** ನಾನು ಮಾನ್ಯ ಸದಸ್ಯರಾದ ವಿಜಯ್ ಸಿಂಗ್‌ರವರ ಹೆಸರನ್ನು ಕರೆದಿದ್ದೇನೆ ಅವರು ಪ್ರಶ್ನೆ ಕೇಳಲಿ.

**(ಗೊಂದಲ)**

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೆ, ಇಲ್ಲಿ ಯಾರು ಸಚಿವರು ಇಲ್ಲ. ಅವರು ಸಚಿವರು ಅಲ್ಲ. ಕೇವಲ ನಾಟಕ ಮಾಡುತ್ತಿದ್ದಾರೆ.

**(ಗೊಂದಲ)**

(87) 15.07.2019 (12.30) LL/KS

**ಡಾ॥ ವೈ.ಎ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಸಚಿವರುಗಳೆಲ್ಲರೂ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ.

**(ಗೊಂದಲ)**

**ಉಪ ಸಭಾಪತಿಯವರು:-** ಈಗ ಪ್ರಶ್ನೋತ್ತರ ಅವಧಿ ಪ್ರಾರಂಭ ಮಾಡೋಣ. ದಯಮಾಡಿ ಎಲ್ಲರೂ ಕುಳಿತುಕೊಳ್ಳಿ.

**(ಗೊಂದಲ)**

**ಉಪ ಸಭಾಪತಿಯವರು:-** ನಾವೆಲ್ಲರೂ ಕೂಡ ಸದನದ ಗೌರವವನ್ನು ಕಾಪಾಡಬೇಕಾಗುತ್ತದೆ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೇ, ಎಲ್ಲಾ ಸಚಿವರು ರಾಜೀನಾಮೆ ಕೊಟ್ಟಿದ್ದಾರೆ. ಆದುದರಿಂದ, ಮಾನ್ಯ ಮುಖ್ಯಮಂತ್ರಿಗಳು ನಮ್ಮ ಪ್ರಶ್ನೆಗಳಿಗೆ ಉತ್ತರ ನೀಡಬೇಕು.

**(ಗೊಂದಲ)**

**ಶ್ರೀ ಸಾ.ರಾ. ಮಹೇಶ್(ಪ್ರವಾಸೋದ್ಯಮ ಹಾಗೂ ರೇಷ್ಮೆ ಸಚಿವರು):-** ಮಾನ್ಯ ಸಭಾಪತಿಯವರೇ, ಸಚಿವರುಗಳು ತಮ್ಮ ರಾಜೀನಾಮೆಯನ್ನು ವಿರೋಧ ಪಕ್ಷದವರಿಗೆ ನೀಡಿದ್ದಾರೆಯೇ? ಅವರಿಗೆ ಏತಕ್ಕೆ ಈ ವಿಚಾರ?

**(ಗೊಂದಲ)**

**ಶ್ರೀ ಪ್ರಿಯಾಂಕ ಖರ್ಗೆ(ಸಮಾಜ ಕಲ್ಯಾಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರಿಗೆ ರೂಲ್ಸ್ ಗೊತ್ತಿದೆಯೇ? They neither know rules nor Constitution. ಅವರಿಗೆ **'ಆಪರೇಷನ್ ಕಮಲ'** ಮಾತ್ರ ಗೊತ್ತಿದೆ. ಮಾನ್ಯ ಸಚಿವರುಗಳ ರಾಜೀನಾಮೆ ಅಂಗೀಕಾರವಾಗಿದೆಯೇ?

**(ಗೊಂದಲ)**

**ಉಪ ಸಭಾಪತಿಯವರು:-** ಸದನದಲ್ಲಿ ನಡೆಯುತ್ತಿರುವ ಗಲಾಟೆಯನ್ನು ಹೊರಗಡೆ ಜನ ನೋಡುತ್ತಿದ್ದಾರೆ.

**(ಗೊಂದಲ)**

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೇ, ಎಲ್ಲಾ ಸಚಿವರುಗಳು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿರುವುದರಿಂದ, ಮಾನ್ಯ ಮುಖ್ಯಮಂತ್ರಿಗಳು ಒಬ್ಬರೇ ಮಂತ್ರಿಮಂಡಲದಲ್ಲಿ ಉಳಿದಿದ್ದಾರೆ.

**(ಗೊಂದಲ)**

**ಶ್ರೀ ಸಾ.ರಾ. ಮಹೇಶ್(ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು):-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರಿಗೆ ಸಂವಿಧಾನಕ್ಕೆ ಗೌರವ ಕೊಡುವುದು ಗೊತ್ತಿರುವುದಿಲ್ಲ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೋಟ ಶ್ರೀನಿವಾಸ ಪೂಜಾರಿ(ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಎಲ್ಲಾ ಸಚಿವರುಗಳು ರಾಜೀನಾಮೆಯನ್ನು ಕೊಟ್ಟಿದ್ದಾರೆ.

**(ಗೊಂದಲ)**

**ಡಾ|| ವೈ.ಎ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಸಚಿವರುಗಳು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ.

**(ಗೊಂದಲ)**

**ಡಾ|| ಜಯಮಾಲ(ಸಭಾ ನಾಯಕರು):-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರು ಕಳೆದ ಒಂದೂವರೆ ವರ್ಷಗಳಿಂದ ನಮಗೆ ಆಡಳಿತ ನಡೆಸುವುದಕ್ಕೆ ಅವಕಾಶ ನೀಡದೆ ಇದೇ ರೀತಿ ತೊಂದರೆ ಕೊಡುತ್ತಿದ್ದಾರೆ.

**(ಗೊಂದಲ)**

**ಶ್ರೀ ಸಾ.ರಾ. ಮಹೇಶ್:-** ಮಾನ್ಯ ಸಭಾಪತಿಯವರೇ, ಸಚಿವರುಗಳು ತಮ್ಮ ರಾಜೀನಾಮೆಯನ್ನು ವಿರೋಧ ಪಕ್ಷದವರಿಗೆ ನೀಡಿದ್ದಾರೆಯೇ? ಅದು ಅಂಗೀಕಾರವಾಗಿದೆಯೇ?

**(ಗೊಂದಲ)**

**ಉಪ ಸಭಾಪತಿಯವರು:-** ಪ್ರಶ್ನೋತ್ತರ ಅವಧಿ ಮುಗಿದ ನಂತರ ತಮಗೆ ಅವಕಾಶ ಮಾಡಿಕೊಡುತ್ತೇನೆಂದು ನಾನು ಈಗಾಗಲೇ ಹೇಳಿದ್ದೇನೆ.

**(ಗೊಂದಲ)**

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೇ, ಮಂತ್ರಿಮಂಡಲದಲ್ಲಿರುವ ಸಚಿವರುಗಳು ರಾಜೀನಾಮೆ ನೀಡಿದ್ದು, ಸದನದ ಒಳಗೊಂದು-ಹೊರಗೊಂದು ಉತ್ತರ ನೀಡುವುದಕ್ಕೆ ಸಾಧ್ಯವಿಲ್ಲ. ಅಲ್ಲದೇ, ನಮ್ಮ ಪ್ರಶ್ನೆಗಳಿಗೆ ಬೇರೆ ಸದನದ ಸದಸ್ಯರುಗಳು ಉತ್ತರ ನೀಡುವುದಕ್ಕೆ ಸಾಧ್ಯವಿಲ್ಲ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೆ.ಟಿ. ಶ್ರೀಕಂಠೇಗೌಡ:-** ಮಾನ್ಯ ಸಭಾಪತಿಯವರೇ, ಮೊದಲು ಪ್ರಶ್ನೋತ್ತರ ಅವಧಿ ಪ್ರಾರಂಭ ಮಾಡಿ.

**(ಗೊಂದಲ)**

**ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ(ಕೃಷಿ ಸಚಿವರು):-** ಮಾನ್ಯ ಸಭಾಪತಿಯವರೇ, ಪ್ರಶ್ನೆ ಸಂಖ್ಯೆ:63ಕ್ಕೆ ಉತ್ತರವನ್ನು ಈಗಾಗಲೇ ಒದಗಿಸಿದ್ದೇನೆ.

**(ಗೊಂದಲ)**

**ಉಪ ಸಭಾಪತಿಯವರು:-** ನಾನು ಈಗಾಗಲೇ ಪ್ರಶ್ನೋತ್ತರ ಅವಧಿ ಪ್ರಾರಂಭ ಮಾಡಿ, ಮೊದಲನೆ ಪ್ರಶ್ನೆ ಶ್ರೀ ವಿಜಯಸಿಂಗ್ ಅವರನ್ನು ಕರೆದಿದ್ದೇನೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ಸಚಿವರುಗಳು ರಾಜೀನಾಮೆ ಕೊಟ್ಟಿರುವುದರಿಂದ ನಮ್ಮ ಪ್ರಶ್ನೆಗಳಿಗೆ ಯಾರು ಉತ್ತರ ನೀಡುತ್ತಾರೆ?

**(ಈ ಹಂತದಲ್ಲಿ ಮಾನ್ಯ ಉಪ ಸಭಾಪತಿಯವರು ತಮ್ಮ ಪೀಠದಿಂದ ಎದ್ದು ನಿಂತರು)**

**(ಗೊಂದಲ)**

**ಉಪ ಸಭಾಪತಿಯವರು:-** ನಾವೆಲ್ಲರೂ ಸದನದ ಗೌರವವನ್ನು ಕಾಪಾಡಬೇಕು. ಆದುದರಿಂದ, ದಯಮಾಡಿ ವಿರೋಧ ಪಕ್ಷದವರು ಮೊದಲು ಒಂದು ಸೂಚನಾ ಪತ್ರ ಕೊಡಿ. ತಮಗೆ ಸದನದ ನಿಯಮಗಳು ಗೊತ್ತಿದೆ. ಸದನದ ಸಮಯ ವ್ಯರ್ಥವಾಗುತ್ತಿದೆ.

**(ಗೊಂದಲ)**

**ಶ್ರೀ ಆಯನೂರು ಮಂಜುನಾಥ್:-** ಮಾನ್ಯ ಸಭಾಪತಿಯವರೇ...

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:–** ಮಾನ್ಯ ಸಭಾಪತಿಯವರೇ, ಆಡಳಿತ ಪಕ್ಷದ ಮೊದಲನೆ ಸ್ಥಾನದಲ್ಲಿ ಕುಳಿತಿರುವವರು ಯಾರೂ ಮಂತ್ರಿಗಳಲ್ಲ. ಅವರು ಈಗಾಗಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ.

**(ಗೊಂದಲ)**

**ಶ್ರೀ ಆಯನೂರು ಮಂಜುನಾಥ:–** ಮಾನ್ಯ ಸಭಾಪತಿಯವರೇ, ಬೇರೆ ಸದನದ ಸದಸ್ಯರು ಹೇಗೆ ನಮ್ಮ ಸದನಕ್ಕೆ ಬರುತ್ತಾರೆ? ಪ್ರಸ್ತುತ ಅವರುಗಳು ಮಂತ್ರಿಮಂಡಲದಲ್ಲಿ ಇರುವುದಿಲ್ಲ.

**(ಗೊಂದಲ)**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:–** ಮಾನ್ಯ ಸಭಾಪತಿಯವರೇ, ನನಗೆ ಮಾತನಾಡಲು ಅವಕಾಶ ಕೊಡಬೇಕೆಂದು ವಿನಂತಿಸುತ್ತಿದ್ದೇನೆ.

**(ಗೊಂದಲ)**

**ಉಪ ಸಭಾಪತಿಯವರು:–** ಎಲ್ಲರೂ ದಯಮಾಡಿ ಕುಳಿತುಕೊಳ್ಳಿ. ಪ್ರಶ್ನೋತ್ತರ ಅವಧಿ ಪ್ರಾರಂಭ ಮಾಡಿದ್ದೇನೆ. ದಯಮಾಡಿ ಎಲ್ಲರೂ ಕುಳಿತುಕೊಳ್ಳಿ. ಈಗಾಗಲೇ ಸಾಕಷ್ಟು ಸಮಯ ವ್ಯರ್ಥವಾಗಿದೆ.

**(ಗೊಂದಲ)**

**(ಈ ಹಂತದಲ್ಲಿ ಮಾನ್ಯ ಉಪ ಸಭಾಪತಿಯವರು ತಮ್ಮ ಪೀಠದಿಂದ ಎದ್ದು ನಿಂತರು)**

**ಶ್ರೀ ಮರಿತಿಬ್ಬೇಗೌಡ:–** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರು ಮೊದಲು ಸಭಾಪತಿಯವರ ಸ್ಥಾನಕ್ಕೆ ಗೌರವ ಕೊಡುವುದನ್ನು ಕಲಿತುಕೊಳ್ಳಬೇಕು. ಉಪ ಸಭಾಪತಿಯವರು ತಮ್ಮ ಪೀಠದಿಂದ ಎದ್ದು ನಿಂತು ಮಾತನಾಡುತ್ತಿದ್ದರೂ ಅವರು ಮಾತನಾಡುತ್ತಿದ್ದಾರೆ.

**(ಗೊಂದಲ)**

**ಶ್ರೀ ಎಸ್.ಆರ್. ಪಾಟೀಲ್:–** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರಿಗೆ ಮಾನ್ಯ ಸಭಾಪತಿಯವರ ಪೀಠಕ್ಕೆ ಗೌರವ ಕೊಡಬೇಕೆಂಬ ಕನಿಷ್ಠ ಸಾಮಾನ್ಯ ಪ್ರಜ್ಞೆ ಕೂಡ ಇರುವುದಿಲ್ಲ.

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:-** ಮಾನ್ಯ ಸಭಾಪತಿಯವರೇ, ಒಂದು ನಿಮಿಷ, ದಯಮಾಡಿ ಮಾನ್ಯ ಸದಸ್ಯರಾದ ಆಯನೂರು ಮಂಜುನಾಥರವರು ಹೇಳುತ್ತಿರುವುದನ್ನು...

**(ಗೊಂದಲ)**

**ಶ್ರೀ ಎಸ್.ವ್ಹಿ. ಸಂಕನೂರ:-** ಮಾನ್ಯ ಸಭಾಪತಿಯವರೇ, ಮೊದಲು ಮಾನ್ಯ ವಿರೋಧ ಪಕ್ಷದ ನಾಯಕರು ಮಾತನಾಡುವುದಕ್ಕೆ ಅವಕಾಶ ಕೋರಿದ್ದು, ತಾವು ಅವರಿಗೆ ಅವಕಾಶ ನೀಡಬೇಕು. ನಂತರ ಬೇರೆಯವರಿಗೆ ಅವಕಾಶ ನೀಡಿ.

**(ಗೊಂದಲ)**

**ಶ್ರೀ ಎಂ.ಬಿ. ಪಾಟೀಲ್(ಗೃಹ ಸಚಿವರು):-** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರು ಸದನದ ಹಿರಿಯ ಸದಸ್ಯರಿಗೆ ಗೌರವ ನೀಡುವುದಿಲ್ಲವೆಂದರೆ ಹೇಗೆ?

**(ಗೊಂದಲ)**

**ಶ್ರೀ ಎಸ್.ವ್ಹಿ. ಸಂಕನೂರ:-** ಮಾನ್ಯ ಸಭಾಪತಿಯವರೇ, ಮೊದಲು ವಿರೋಧ ಪಕ್ಷದ ನಾಯಕರಿಗೆ ಮಾತನಾಡುವುದಕ್ಕೆ ಅವಕಾಶ ನೀಡಬೇಕೆಂದು ವಿನಂತಿಸುತ್ತೇನೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ...

**(ಗೊಂದಲ)**

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಭಾಪತಿಯವರೇ...

**(ಗೊಂದಲ)**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ:-** ಮಾನ್ಯ ಸಭಾಪತಿಯವರೇ, ದಯಮಾಡಿ ಯಾರು ಗಲಾಟೆ ಮಾಡುವುದು ಬೇಡ. ಎಲ್ಲರಿಗೂ ಮಾತನಾಡುವುದಕ್ಕೆ ತಾವು ಅನುಮತಿ ಕೊಡಿ. ವಿರೋಧ ಪಕ್ಷದವರ ಪ್ರಶ್ನೆಗಳಿಗೆ ಉತ್ತರ ನೀಡುವುದಕ್ಕೆ ಆಡಳಿತ ಪಕ್ಷಕ್ಕೆ ಅನುಮತಿ ಕೊಡಿ. ಎಲ್ಲರೂ ಸಾವಕಾಶವಾಗಿ ಮಾತನಾಡಲಿ. ಪ್ರತಿಯೊಬ್ಬರು ಕೇಳಿದ ಪ್ರಶ್ನೆಗಳಿಗೆ ಸರ್ಕಾರ ಉತ್ತರ ಕೊಡುತ್ತದೆ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಡಾ॥ ವೈ.ಎ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಸುಮಾರು 15 ಸಚಿವರುಗಳು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ. ಇನ್ನೂ ಈ ಸರ್ಕಾರ ಅಧಿಕಾರದಲ್ಲಿದೆಯೇ?

**(ಗೊಂದಲ)**

**ಶ್ರೀ ಸಾ.ರಾ. ಮಹೇಶ್:-** ಮಾನ್ಯ ಸಭಾಪತಿಯವರೇ, ಸರ್ಕಾರ ಅಧಿಕಾರದಲ್ಲಿ ಇಲ್ಲದೇ ಇದ್ದರೆ ವಿರೋಧ ಪಕ್ಷದವರು ಅಧಿವೇಶನಕ್ಕೆ ಏತಕ್ಕೆ ಹಾಜರಾಗಿರುತ್ತಾರೆ? ಅದನ್ನಾದರೂ ಹೇಳಬೇಕು.

**(ಗೊಂದಲ)**

**ಶ್ರೀ ಮರಿತಿಬ್ಬೇಗೌಡ:-** ಮಾನ್ಯ ಸಭಾಪತಿಯವರೇ, ಮೊದಲು ಪ್ರಶ್ನೋತ್ತರ ಅವಧಿ ಪ್ರಾರಂಭ ಮಾಡಿ. ವಿರೋಧ ಪಕ್ಷದ ನಾಯಕರು ಮಾನ್ಯ ಸಭಾಪತಿಯವರ ಮಾತಿಗೆ ಗೌರವನ್ನು ನೀಡಬೇಕು.

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೇ, ಮೊದಲು ಪ್ರಶ್ನೋತ್ತರ ಅವಧಿ ಪ್ರಾರಂಭ ಮಾಡಿ.

**(ಗೊಂದಲ)**

**ಉಪ ಸಭಾಪತಿಯವರು:-** ಸದನವನ್ನು ಅರ್ಧ ಗಂಟೆ ಕಾಲಾವಧಿಯವರೆಗೆ ಮುಂದೂಡುತ್ತಿದ್ದೇನೆ.

(88)/15.07.2019/1.20/ಎಸ್‌ಕೆ-ಜಿಆರ್

**(ಅಪರಾಹ್ನ 12 ಗಂಟೆ 37 ನಿಮಿಷಕ್ಕೆ ಮುಂದೂಡಲ್ಪಟ್ಟ ಸದನವು ಪುನಃ 1 ಗಂಟೆ 20 ನಿಮಿಷಕ್ಕೆ ಸಮಾವೇಶಗೊಂಡಿತು)**

**(ಮಾನ್ಯ ಉಪ ಸಭಾಪತಿಯವರು ಪೀಠವನ್ನು ಅಲಂಕರಿಸಿದರು.)**

**ಶ್ರೀ ಐವನ್ ಡಿ'ಸೋಜಾ:-** ಸದನ ಪ್ರಾರಂಭವಾದ ಕೂಡಲೇ ವಿರೋಧ ಪಕ್ಷದ ನಾಯಕರು ಪ್ರಶ್ನೋತ್ತರ ಅವಧಿಯನ್ನು ನಡೆಸಲು ನಮಗೆ ಅವಕಾಶವನ್ನು ಕೊಡಬೇಕೆಂದು ನಾನು ತಮ್ಮ ಮೂಲಕ ಕೋರುತ್ತೇನೆ. ಪ್ರಶ್ನೋತ್ತರ ಅವಧಿ ಮುಗಿದ ಮೇಲೆ...

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಉಪ ಸಭಾಪತಿಯವರು:-** ಈಗ ನಾನು ಪ್ರಶ್ನೋತ್ತರವನ್ನು ಪ್ರಾರಂಭ ಮಾಡುತ್ತಿದ್ದೇನೆ.

**(ಈ ಹಂತದಲ್ಲಿ ವಿರೋಧ ಪಕ್ಷದ ನಾಯಕರು ಹಾಗೂ ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು ಭಿತ್ತಿಪತ್ರಗಳನ್ನು ಪ್ರದರ್ಶಿಸಿ, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.)**

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೇ, ರಾಜ್ಯದ ಜ್ವಲಂತ ಸಮಸ್ಯೆಗಳಿವೆ ಅದಕ್ಕೆ ಮಾನ್ಯ ಮಂತ್ರಿಯವರು ಉತ್ತರ ಕೊಡುವುದಕ್ಕೆ ರೆಡಿಯಾಗಿದ್ದಾರೆ. ...

**(ಗೊಂದಲ)**

**ಉಪ ಸಭಾಪತಿಯವರು:-** ಪ್ರಶ್ನೋತ್ತರವನ್ನು ಪ್ರಾರಂಭ ಮಾಡುತ್ತಿದ್ದೇನೆ. ದಯವಿಟ್ಟು ಕುಳಿತುಕೊಳ್ಳಿ.

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ:-** ಪ್ರಶ್ನೋತ್ತರವನ್ನು ನಡೆಸುವುದಕ್ಕೆ ಅವಕಾಶ ಮಾಡಿಕೊಡಿ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಸರ್ಕಾರದ ಕಡೆಯಿಂದ ರಾಜೀನಾಮೆ ಕೊಡುತ್ತೇವೆಂದು ಹೇಳಿದರೆ ಸಾಕು, ನಮ್ಮದೇನು ವಾದವಿಲ್ಲ.

**(ಗೊಂದಲ)**

**ಉಪ ಸಭಾಪತಿಯವರು:-** ಮಾನ್ಯ ಶರಣಪ್ಪ ಮಟ್ಟೂರರವರ ಪ್ರಶ್ನೆ ಇದೆ. ದಯವಿಟ್ಟು ಕುಳಿತುಕೊಳ್ಳಿ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಒಂದು ಸರ್ಕಾರ ಬೆಳೆಯಬೇಕಾದರೆ, ಬಹುಮತವಾದರೂ ಬೇಕಲ್ಲವೇ?

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ,..

**(ಗೊಂದಲ)**

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ದಯಮಾಡಿ ಕುಳಿತುಕೊಳ್ಳಿ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಈಗ ಹದಿನಾರು ಜನ ಶಾಸಕರು ರಾಜೀನಾಮೆ ಕೊಟ್ಟಿದ್ದಾರೆ.

**(ಗೊಂದಲ)**

**ಉಪ ಸಭಾಪತಿಯವರು:-** ನಾನು ಮೊದಲೇ ಹೇಳಿದ್ದೆ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, ಈಗ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಬಹುಮತ ಹೊಂದಿರುವ ಸರ್ಕಾರ ಇರಬೇಕಾದುದು. ಆದರೆ ಬಹುಮತವಿಲ್ಲದೇ ..

**(ಗೊಂದಲ)**

**ಶ್ರೀ ಶರಣಪ್ಪ ಮಟ್ಟೂರು:-** ಮಾನ್ಯ ಸಭಾಪತಿಯವರೇ, ನನಗೆ ಅವಕಾಶ ಮಾಡಿಕೊಟ್ಟಿದ್ದಕ್ಕಾಗಿ ಧನ್ಯವಾದಗಳು.

**(ಗೊಂದಲ)**

**ಉಪ ಸಭಾಪತಿಯವರು:-** ಮಾನ್ಯ ಸಚಿವರು ಉತ್ತರ ಕೊಡಬೇಕು. ದಯವಿಟ್ಟು ಕುಳಿತುಕೊಳ್ಳಿ. ಪ್ರಶ್ನೋತ್ತರ ವೇಳೆ ನಡೆಯಲಿ.

**(ಗೊಂದಲ)**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ:-** ಮಾನ್ಯ ಸಭಾಪತಿಯವರೇ, . . .

**(ಗೊಂದಲ)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**ಡಾ॥ ಜಯಮಾಲ(ಸಭಾ ನಾಯಕರು):-** ಮಾನ್ಯ ಸಭಾಪತಿಯವರೇ, ಸರ್ಕಾರಕ್ಕೆ ಸಂಪೂರ್ಣ ಬೆಂಬಲ ಇದೆ.

**(ಗೊಂದಲ)**

**ಉಪ ಸಭಾಪತಿಯವರು:-** ವಿರೋಧ ಪಕ್ಷದ ನಾಯಕರೇ, ಮಾನ್ಯ ಸದಸ್ಯರುಗಳೇ ದಯವಿಟ್ಟು ಕುಳಿತುಕೊಳ್ಳಿ. ಮೊದಲು ಸದಸ್ಯರುಗಳು ಪೀಠಕ್ಕೆ ಗೌರವ ಕೊಡಬೇಕು. ನಾನು ಯಾರಿಗೂ ಮಾತನಾಡುವುದಕ್ಕೆ ಅವಕಾಶವನ್ನು ಕೊಟ್ಟಿಲ್ಲ. ಈ ರೀತಿಯಾಗಿ ಒಟ್ಟಿಗೆ ನಿಂತು ಮಾತನಾಡಿದರೆ ಯಾವುದೂ ಕಡತಕ್ಕೆ ಹೋಗಬಾರದು. ದಯವಿಟ್ಟು ಎಲ್ಲರೂ ಕುಳಿತುಕೊಳ್ಳಿ.

**(ಗೊಂದಲ)**

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ಹದಿನಾರು ಜನ ಶಾಸಕರು ರಾಜೀನಾಮೆ ಕೊಟ್ಟಿದ್ದಾರೆ. ಸ್ವತಃ ಮುಖ್ಯಮಂತ್ರಿಗಳೇ ವಿಧಾನಸಭೆಯಲ್ಲಿ ವಿಶ್ವಾಸಮತವನ್ನು ಬಯಸಿದ್ದಾರೆ. ಈ ಸಮಯದಲ್ಲಿ ಸರ್ಕಾರದಲ್ಲಿ ಮುಂದುವರೆಯುವುದಕ್ಕೆ ಯಾರಿಗೂ ನೈತಿಕ ಹಕ್ಕಿಲ್ಲ. ರಾಜೀನಾಮೆ ಕೊಟ್ಟಿಲ್ಲವೇ?

**(ಗೊಂದಲ)**

**ಉಪ ಸಭಾಪತಿಯವರು:-** ದಯವಿಟ್ಟು ಎಲ್ಲರೂ ಕುಳಿತುಕೊಳ್ಳಿ. ಈ ರೀತಿ ಒಟ್ಟಿಗೆ ಎದ್ದು ನಿಂತು ಮಾತನಾಡಿದರೆ ಯಾರು ಮಾತನಾಡಿದರೂ ಅದು ಕಡತಕ್ಕೆ ಹೋಗುವುದಿಲ್ಲ.

**(ಗೊಂದಲ)**

**(ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರೆಲ್ಲರೂ ವಿರೋಧ ಪಕ್ಷದ ವಿರುದ್ಧ ಭಿತ್ತಿಪತ್ರಗಳನ್ನು ಪ್ರದರ್ಶಿಸುತ್ತಾ ಘೋಷಣೆಗಳನ್ನು ಕೂಗುತ್ತಿದ್ದರು.)**

**ಡಾ॥ ಜಯಮಾಲ:-** ಮಾನ್ಯ ಸಭಾಪತಿಯವರೇ, ರಾಜ್ಯ ಸರ್ಕಾರದ ಇಷ್ಟು ಹಣ ಮತ್ತು ಸಮಯವನ್ನು ಇವತ್ತು ಹಾಳು ಮಾಡುವುದಕ್ಕೆ ಹೊರಟಿದ್ದಾರೆ. ವಿರೋಧ ಪಕ್ಷದ ನಾಯಕರು ಈ ತರಹ ಕೆಲಸವನ್ನು ಮಾಡಬಾರದು. ಇವತ್ತು ಜನರ ಕಷ್ಟಕ್ಕೆ ಹೆಗಲನ್ನು ಕೊಡುವುದಕ್ಕೆ ...

**(ಗೊಂದಲ)**

**ಉಪ ಸಭಾಪತಿಯವರು:-** ಯಾವುದೇ ವಿಷಯವೂ ಕಡತಕ್ಕೆ ಹೋಗಬಾರದು. ನಾನು ಯಾರಿಗೂ ಮಾತನಾಡುವುದಕ್ಕೆ ಅನುಮತಿಯನ್ನು ಕೊಟ್ಟಿಲ್ಲ.

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

**(ಗೊಂದಲ)**

**ಡಾ॥ ಜಯಮಾಲ:-** ಮಾನ್ಯ ಸಭಾಪತಿಯವರೇ, ಇವತ್ತಿನ ದಿನ ನಮ್ಮ ಪಕ್ಷದ ನಾಯಕರನ್ನು ಬಾಂಬೆಯಲ್ಲಿಟ್ಟಂತಹವರು ವಿರೋಧ ಪಕ್ಷದವರು. ಇವರು ಈ ಪ್ರಶ್ನೆಯನ್ನು ಕೇಳುತ್ತಿದ್ದಾರೆ. ಸದನವನ್ನು ನಡೆಸುವುದಕ್ಕೆ ಅವಕಾಶವನ್ನು ಮಾಡಿಕೊಡಲಿ ಎಂದು ತಮ್ಮ ಮೂಲಕ ಕೇಳುತ್ತಿದ್ದೇನೆ.

**(ಗೊಂದಲ)**

**(ಈ ಹಂತದಲ್ಲಿ ವಿರೋಧ ಪಕ್ಷದ ನಾಯಕರು ಹಾಗೂ ಭಾರತೀಯ ಜನತಾ ಪಕ್ಷದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ಕುಳಿತು ಭಿತ್ತಿಪತ್ರಗಳನ್ನು ಪ್ರದರ್ಶಿಸುತ್ತಾ ಸರ್ಕಾರದ ವಿರುದ್ಧ "ಧಿಕ್ಕಾರ ಧಿಕ್ಕಾರ"ಎಂಬ ಘೋಷಣೆಗಳನ್ನು ಕೂಗುತ್ತಿದ್ದರು.)**

**(ಈ ಹಂತದಲ್ಲಿ ಆಡಳಿತ ಪಕ್ಷದ ಸದಸ್ಯರೆಲ್ಲರೂ ವಿರೋಧ ಪಕ್ಷದ ವಿರುದ್ಧ ಭಿತ್ತಿಪತ್ರಗಳನ್ನು ಪ್ರದರ್ಶಿಸುತ್ತಾ, "ಬಿಜೆಪಿಗೆ ಧಿಕ್ಕಾರ, ಧಿಕ್ಕಾರ" ಎಂಬ ಘೋಷಣೆಗಳನ್ನು ಕೂಗುತ್ತಿದ್ದರು.)**

**(ಗೊಂದಲ)**

**ಉಪ ಸಭಾಪತಿಯವರು:-** ಈಗ ಸದನವನ್ನು ನಾಳೆ ಬೆಳಿಗ್ಗೆ 11.30 ಗಂಟೆಯವರೆಗೆ ಮುಂದೂಡಲಾಗಿದೆ.

**(ಸದನವು ಮಧ್ಯಾಹ್ನ 1 ಗಂಟೆ 26 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ಮಂಗಳವಾರ ದಿನಾಂಕ: 16ನೇ ಜುಲೈ ಮಾಹೆ 2019ರಂದು ಬೆಳಿಗ್ಗೆ 11.30 ಗಂಟೆಗೆ ಸೇರಲು ನಿಶ್ಚಯಿಸಿತು.)**

"ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"